ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	418
ಸದಸ್ಯರ ಹೆಸರು	:	ಶ್ರೀ ಎಂ.ಎಲ್. ಅನೀಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	:	18-02-2022.
ಉತ್ತರಿಸುವವರು	:	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಗ್ರಾಮ ಪಂಚಾಯಿತಿಗಳಲ್ಲಿ ಪಕ್ಷದ ಚಿಹ್ನೆ ಇಲ್ಲದೆ ಚುನಾವಣೆಗಳನ್ನು ನಡೆಸುತ್ತಿರುವುದರ ಉದ್ದೇಶವೇನು; (ಮಾಹಿತಿ ನೀಡುವುದು)	ಸಂವಿಧಾನ (73ನೇ ತಿದ್ದುಪಡಿ) ಅಧಿನಿಯಮ, 1992 ರ ಅನುಚ್ಛೇಧ 243-ಕೆ ರಲ್ಲಿ ಪಂಚಾಯತಿಗಳಲ್ಲಿ ಚುನಾವಣೆಗಳನ್ನು ನಡೆಸುವ ಬಗ್ಗೆ ಉಪಬಂಧವಿದ್ದು, ಅನುಚ್ಛೇಧ 243-ಕೆ (4) ರಲ್ಲಿ ಈ ಸಂವಿದಾನದ ಉಪಬಂಧಗಳಿಗೆ ಒಳಪಟ್ಟು ಪಂಚಾಯಿತಿಗಳ ಚುನಾವಣೆಗಳಿಗೆ ಅನ್ವಯಿಸುವ ಎಲ್ಲಾ ವಿಷಯಗಳ ಬಗ್ಗೆ ಅಥವಾ ಅವುಗಳ ಸಂಬಂಧದಲ್ಲಿ ವಿಧಾನ ಮಂಡಲವು ಕಾನೂನಿನ ಮೂಲಕ ಉಪಬಂಧವನ್ನು ಮಾಡಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 7(2) ರಲ್ಲಿ ಗ್ರಾಮ ಪಂಚಾಯತಿಗೆ ಚುನಾವಣೆಗಳನ್ನು ಪಕ್ಷದ ಆಧಾರ ರಹಿತವಾಗಿ ಗೊತ್ತುಪಡಿಸಬಹುದಾದಂತಹ ನಿಯಮಗಳಿಗೆ ಅನುಸಾರವಾಗಿ ಮತದಾನದ ಮೂಲಕ ನಡೆಸಲು ಅವಕಾಶ ಕಲ್ಪಿಸಲಾಗಿದೆ.
(ಆ)	ರಾಜಕೀಯ ಪಕ್ಷದ ಕಾರ್ಯಕರ್ತರಾಗಿದ್ದರೂ ಅವರೆಲ್ಲಾ ಪಕ್ಷದ ಚಿಹ್ನೆಯ ಮೇಲೆ ಚುನಾವಣೆ ಎದುರಿಸದೇ ಇರುವುದರಿಂದ ಪಕ್ಷಾಂತರ ನಿಷೇಧ ಕಾಯ್ದೆ ಅನ್ವಯವಾಗುತ್ತಿಲ್ಲ ಎಂಬುದು ನಿಜವೇ; ಹಾಗಿದ್ದಲ್ಲಿ, ವಿವಿಧ ಚುನಾವಣೆಗಳಲ್ಲಿ ಪಕ್ಷದ ಆಧಾರದ ಮೇಲೆ ಮತದಾನವಾಗದೆ ಇರುವುದರಿಂದ ಅತೀ ಹೆಚ್ಚು ಭ್ರಷ್ಟಾಚಾರಕ್ಕೆ ಪ್ರಸ್ತುತ ವ್ಯವಸ್ಥೆ ಕಾರಣವಾಗಿದೆಯೇ;	ಇಲ್ಲ.
(ಇ)	ಹಾಗಿದ್ದಲ್ಲಿ, ಈ ವ್ಯವಸ್ಥೆಯನ್ನು ಬದಲಾಯಿಸಲು ಸರ್ಕಾರದಿಂದ ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ;	ಉದ್ಭವಿಸುವುದಿಲ್ಲ.

(ಈ)	ಗ್ರಾಮ ಪಂಚಾಯಿತಿ ಚುನಾವಣೆಗಳನ್ನು ಪಕ್ಷದ ಆಧಾರದ ಮೇಲೆಯೇ ಮತ್ತು ಪಕ್ಷದ ಚಿಹ್ನೆ ಅಡಿಯಲ್ಲಿ ಚುನಾವಣೆ ಎದುರಿಸಲು ವ್ಯವಸ್ಥೆ ರೂಪಿಸಲು ಪಂಚಾಯತ್ ರಾಜ್ ಕಾಯ್ದೆಗೆ ತಿದ್ದುಪಡಿ ತರುವಲ್ಲಿ ಸರ್ಕಾರ ಯೋಜನೆ ರೂಪಿಸಿದೆಯೇ; ಈ ಬಗ್ಗೆ ಸರ್ಕಾರದ ನಿಲುವೇನು?	ಇಂತಹ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ.

ಸಂ. ಗ್ರಾಅಪ 30 ಗ್ರಾಪಂಅ 2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು